# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 89 | Pages. 2 | Date: 07-03-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 89 - ಪುಟಗಳು : 2 | 07-03-2026 | ಶನಿವಾರ | Ph: 8762954248 | ದರ : ₹1


# ಹಾಸನ ಜಿಲ್ಲೆಗೆ ಮತ್ತದೇ ನಿರಾಸೆ

## ಸಣ್ಣ ಸಣ್ಣ ಯೋಜನೆ ಕೊಡುಗೆ: ದೊಡ್ಡ ಘೋಷಣೆ ಮರೆಗೆ: ಹೊಸ ಪ್ರಸ್ತಾಪ ಹುಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜಕೀಯ ಕಾರಣಕ್ಕೋ, ಆಳುವವರ ತಾತ್ಸಾರವೋ, ಹಾಸನ ಜಿಲ್ಲೆಯನ್ನು ಈ ಬಾರಿಯ ಬಜೆಟ್‌ನಲ್ಲೂ ಕಡೆಗಣಿಸಲಾಗಿದೆ.

ಸಣ್ಣ ಸಣ್ಣ ಯೋಜನೆ ನೀಡಿಕೆಯಲ್ಲಿ ಹಾಸನ ಜಿಲ್ಲೆಯ ಹೆಸರು ಪ್ರಸ್ತಾಪ ಮಾಡಲಾಗಿದೆ. ಉಳಿದಂತೆ ಜ್ವಲಂತೆ ಸಮಸ್ಯೆ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರು ಚಕಾರ ಎತ್ತಿಲ್ಲ. ಹಾಗಾಗಿ ಅವರ ದಾಖಲೆಯ 17ನೇ ಬಜೆಟ್ ಜಿಲ್ಲೆಯ ಮಟ್ಟಿಗೆ ತೀರಾ ನಿರಾಶದಾಯಕ ಎನಿಸಿದೆ.

ಕಳೆದ ಎರಡು ತಿಂಗಳ ಹಿಂದೆ ನಗರದಲ್ಲಿ ನಡೆದ ಸರ್ಕಾರದ ಬೃಹತ್ ಸಮಾವೇಶದಲ್ಲಿ ಸಾವಿರಾರು ಜನರ ಸಮ್ಮುಖದಲ್ಲಿ ಮಾತನಾಡಿದ್ದ ಮುಖ್ಯಮಂತ್ರಿ ಅವರು ಹೇಮಾವತಿ ಜಲಾಶಯದ ಮುಂಭಾಗ, ಮಂಡ್ಯ ಜಿಲ್ಲೆ ಕೆಆರ್‌ಎಸ್ ಮಾದರಿ ಬೃಂದಾವನ ಅಭಿವೃದ್ಧಿಪಡಿಸಲು ಕ್ರಮವಹಿಸುವುದಾಗಿ ಭರವಸೆ ನೀಡಿದ್ದರು.

ಆದರೆ ಬಜೆಟ್‌ನಲ್ಲಿ ಅದರ ಪ್ರಸ್ತಾಪ ಮಾಡಿಲ್ಲ. ಅಲ್ಲಿಗೆ ಬಹು ವರ್ಷಗಳ ಬೇಡಿಕೆಗೆ ಈ ಬಾರಿಯೂ ಮನ್ನಣೆ ಸಿಕ್ಕಿಲ್ಲ.

ವಿಶ್ವಪರಂಪರೆ ಪಟ್ಟಿಗೆ ಸೇರಿರುವ ಬೇಲೂರು, ಹಳೇಬೀಡು ಪಟ್ಟಣಗಳ ಅಭಿವೃದ್ಧಿಗೆ ಅನುದಾನ ಕನಸು ಮತ್ತೆ ಮರೀಚಿಕೆಯಾಗಿದೆ. ಬೇಲೂರು-ಹಳೇಬೀಡು ಜೊತೆಗೆ ವಿಶ್ವವಿಖ್ಯಾತ ಶ್ರವಣಬೆಳಗೊಳ ಅಭಿವೃದ್ಧಿ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್ ಘೋಷಣೆ ಮಾತು ಹುಸಿಯಾಗಿದೆ. ಮಲೆನಾಡು ಭಾಗದ ಜನರ ಮೊಗ್ಗಲು ಮುಳ್ಳಾಗಿರುವ ಕಾಡಾನೆ ಸಮಸ್ಯೆ ಪರಿಹಾರಕ್ಕೆ ನಿಖರವಾದ



ಪ್ರಸ್ತಾಪ ಮಾಡಿಲ್ಲ. ಹೀಗಾಗಿ ಸಕಲೇಶಪುರ, ಬೇಲೂರು, ಅರಕಲಗೂಡು ಹಾಗೂ ಆಲೂರು ತಾಲೂಕುಗಳ ಜನ ಮತ್ತದೇ ನೋವಿನಲ್ಲೇ ಭಯದಲ್ಲೇ ದಿನ ದೂಡುವಂತಾಗಿದೆ. ಕಾಡಾನೆ ಹಾವಳಿಗೆ ಸಿಲುಕಿ ಸಾವು-ನೋವುಗಳಿಂದ ನರಳುವುದು ಅನಿವಾರ್ಯವಾಗಿದೆ.

2026-27ನೇ ಸಾಲಿನಲ್ಲಿ ವೈದ್ಯಕೀಯ ಕಾಲೇಜುಗಳು, ಆಸ್ಪತ್ರೆಗಳು ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ನಿರ್ಮಾಣ ಕಾಮಗಾರಿಗಳಿಗೆ 620 ಕೋಟಿ ರೂ.ಗಳ ಅನುದಾನ ಮತ್ತು ಉಪಕರಣಗಳ ಖರೀದಿಗಾಗಿ 220 ಕೋಟಿ ರೂ.ಗಳ ಅನುದಾನ ಮೀಸಲಿಡಲಾಗಿದೆ ಎಂದಿದ್ದಾರೆ. ಆದರೆ ಅದರಲ್ಲಿ ಹಾಸನ ಹೆಸರು ಹೇಳಿಲ್ಲ.

### ಮಾನವ-ವನ್ಯ ಪ್ರಾಣಿ ಸಂಘರ್ಷ ನಿವಾರಣಾ ಕಾರ್ಯತಂತ್ರ ಯೋಜನೆ

ಮಾನವ-ವನ್ಯ ಪ್ರಾಣಿ ಸಂಘರ್ಷ ನಿವಾರಣೆ ಅತೀ ಮುಖ್ಯವಾದ ಕಾರ್ಯವಾಗಿರುವುದರಿಂದ ಕಳೆದ ಮೂರು ವರ್ಷಗಳಲ್ಲಿ, ಬೆಳೆ ಹಾನಿ, ಜಾನುವಾರು ನಷ್ಟ, ಮಾನವ ಪ್ರಾಣ ಹಾನಿ ಇತ್ಯಾದಿ ಪರಿಹಾರವಾಗಿ ಒಟ್ಟಾರೆ 1,044 ಕೋಟಿ ರೂ. ವೆಚ್ಚ ಮಾಡಲಾಗಿದೆ. ಹೊಸದಾಗಿ ಮೂರು ಆನೆ ಕಾರ್ಯಪಡೆ ಮತ್ತು ಒಂದು ಹೊಸ ಚಿರತೆ ಕಾರ್ಯಪಡೆ ರಚನೆ. ಕಾರ್ಯಪಡೆಗಳಿಗಾಗಿ ಹೊಸದಾಗಿ 358 ಹುದ್ದೆಗಳ ಸೃಜನೆ. ರೈಲ್ವೆ ಬ್ಯಾರಿಕೇಡ್, ಟ್ರೆಂಚಿಂಗ್, ಸೋಲಾರ್ ಫೆನ್ಸಿಂಗ್ ಇತರೆ ರಕ್ಷಣಾ ಕಾರ್ಯ. ಮಾನವ-ವನ್ಯಪ್ರಾಣಿ ಸಂಘರ್ಷ ಕಡಿಮೆ ಮಾಡುವ ಉದ್ದೇಶದಿಂದ ಕರ್ನಾಟಕ ಮಾನವ-ವನ್ಯಪ್ರಾಣಿ ಸಂಘರ್ಷ ನಿವಾರಣಾ ಕಾರ್ಯತಂತ್ರ ಯೋಜನೆ ಅನುಷ್ಠಾನಗೊಳಿಸಲು ಮುಂದಿನ 5 ವರ್ಷದಲ್ಲಿ 1,500 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕ್ರಮ ಕೈಗೊಳ್ಳಲಾಗುವುದು. ಇದಕ್ಕಾಗಿ ಪ್ರಸಕ್ತ ಸಾಲಿನಲ್ಲಿ 269 ಕೋಟಿ ರೂ. ಮೀಸಲಿರಿಸಲಾಗಿದೆ ಎಂದು ಸಿಎಂ ಹೇಳಿದ್ದಾರೆ.

ರಾಜ್ಯದ ಏಳು ದೇಶೀಯ ವಿಮಾನ ನಿಲ್ದಾಣಗಳ ಅಭಿವೃದ್ಧಿಗಾಗಿ ಈವರೆಗೂ 1,593 ಕೋಟಿ ರೂ. ಅನುದಾನವನ್ನು ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡಲಾಗಿದೆ. ಪ್ರಸಕ್ತ ಸಾಲಿಗೆ 200 ಕೋಟಿ ರೂ. ಅನುದಾನ ನಿಗದಿಪಡಿಸಲಾಗಿದೆ ಎಂದು ಸಿಎಂ ಹೇಳಿದ್ದಾರೆ. ಆದರೆ ಅದರಲ್ಲಿ ಹಾಸನ ವಿಮಾನ ನಿಲ್ದಾಣದ ಹೆಸರು ಪ್ರಸ್ತಾಪ ಮಾಡಿಲ್ಲ.

## ಇಂದಿನಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಮಾ. 7 ಹಾಗೂ 8ರಂದು ಹಕ್ಕೊತ್ತಾಯ ಜಾಥಾ ಹಾಗೂ ಸಾರ್ವಜನಿಕ ಸಮಾವೇಶ ಹಮಿಕೊಳ್ಳಲಾಗಿದೆ ಎಂದು ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟದ ನಾಯಕಿ ಹಾಗೂ ಲೇಖಕಿ ಹೆಚ್.ಎಸ್.ಅನುಪಮಾ ಹೇಳಿದರು.



ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿದ ಅವರು, ರಾಜ್ಯ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟದಿಂದ ನಡೆಯುತ್ತಿರುವ 14ನೇ ಕಾರ್ಯಕ್ರಮ ಇದಾಗಿದೆ. ಸಾಮಾಜಿಕ ಹೋರಾಟಗಾರ್ತಿ ತೀಸ್ತಾ ಸೆಟಲ್ವಾಡ್ ಹಾಗು ಸಾಮಾಜಿಕ, ಲೈಂಗಿಕ ಅಲ್ಪಸಂಖ್ಯಾತರ ಹಕ್ಕುಗಳ ಹೋರಾಟಗಾರ್ತಿ ಅಕ್ಕೈ ಪದಶಾಲಿ ಸಮಾರಂಭ ಉದ್ಘಾಟಿಸಲಿದ್ದಾರೆ ಎಂದರು.

ಎರಡೂ ದಿನ ಮಹತ್ವದ ವಿಚಾರಗಳ ಕುರಿತು ಗೋಷ್ಠಿಗಳು ನಡೆಯಲಿದ್ದು, ರಾಜ್ಯ ಹಾಗೂ ಹೊರ ರಾಜ್ಯದ ಸಂಪನ್ಮೂಲ ವ್ಯಕ್ತಿಗಳು ವಿಷಯ ಮಂಡಿಸಲಿದ್ದಾರೆ. ಮಾ. 7ರ ಶನಿವಾರ ಬೆಳಿಗ್ಗೆ 9.30ಕ್ಕೆ ಮಹಾರಾಜ ಪಾರ್ಕ್‌ನಿಂದ ಮೆರವಣಿಗೆ ನಡೆಯಲಿದೆ. ಹಾಸನಾಂಬ ಕಲಾಕ್ಷೇತ್ರದಲ್ಲಿ ವೇದಿಕೆ ಕಾರ್ಯಕ್ರಮ ಏರ್ಪಡಿಸಿದ್ದು, ಮಹಿಳಾ ಚೈತನ್ಯ ದಿನದ ಕುರಿತು ಮೈಸೂರಿನ ಡಾ. ಸುಕನ್ಯಾ ಕನಾರಳ್ಳಿ ಮಾತನಾಡುವರು. ತೀಸ್ತಾ ಸೆಟಲ್ವಾಡ್ ದಿಕ್ಸೂಚಿ ಮಾತುಗಳನ್ನಾಡಲಿದ್ದಾರೆ. ವಿಬಿ-ಜಿ-ರಾಮ್-ಜಿ ರದ್ದಾಗಲಿ, ಮನರೇಗಾ ಮತ್ತೆ ಜಾರಿಯಾಗಲಿ ಎಂಬ ವಿಷಯ ಕುರಿತು ಮನರೇಗಾ ರಕ್ಷಣಾ ಒಕ್ಕೂಟದ ದೇವಿ ಅವರು ವಿಷಯ ಮಂಡಿಸಲಿದ್ದಾರೆ. ಇದೇ ವೇಳೆ ಮಹಿಳಾ ಸಮಾವೇಶದ ಸಾಂದರ್ಭಿಕ ಗ್ರಂಥ ಹಾಸನ ಮಣ್ಣಿನ ಹೆಣ್ಣು ದನಿಗಳು ಬಿಡುಗಡೆಯಾಗಲಿದೆ ಎಂದರು.

ಸಂಜೆ 6 ಗಂಟೆಗೆ ಮಹಾವೀರ ವೃತ್ತದಲ್ಲಿ ಮೌನ ಜಾಗೃತಿ ಕಾರ್ಯಕ್ರಮ ಹಮಿಕೊಂಡಿದ್ದು, ಸ್ತ್ರೀ ರೋಗ ತಜ್ಞೆ ಡಾ. ಎ.ಸಾವಿತ್ರಿ ಉದ್ಘಾಟಿಸುವರು. ಮಾ. 8ರಂದು ಮಹಿಳಾ ದೌರ್ಜನ್ಯ: ಸವಾಲುಗಳು, ಬಿಡುಗಡೆಯ ಸಾಧ್ಯತೆಗಳು ಎಂಬ ವಿಚಾರ ಕುರಿತು ಗೋಷ್ಠಿ ನಡೆಲಿದೆ. ಬೆಳಗಾವಿ ವಿಭಾಗ ಪ್ರಾದೇಶಿಕ ಆಯುಕ್ತೆ ಕೆ.ಎಂ.ಜಾನಕಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಅರಿವಿನ ಪಯಣ ಎಂಬ ಕಿರು ಹೊತ್ತಿಗೆಯನ್ನು ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಲಾಗುತ್ತದೆಂದರು. ಕಾರ್ಯಕ್ರಮದ ಪೋಸ್ಟರ್ ಸಹ ಬಿಡುಗಡೆ ಮಾಡಲಾಯಿತು. ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟದ ಪದಾಧಿಕಾರಿಗಳಾದ ಡಾ.ಸಬಿತಾ ಬನ್ನಾಡಿ, ಭಾನುಮತಿ, ಲೀಲಾವತಿ, ಶೈಲಜಾ, ಕಲಾವತಿ ಮಧೂಸೂದನ್ ಹಾಜರಿದ್ದರು.

## ಜೆಡಿಎಸ್-ಬಿಜೆಪಿ ಮೈತ್ರಿ ಹೈಕಮಾಂಡ್ ನಿರ್ಧಾರವೇ ಅಂತಿಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ರಾಜ್ಯದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಕುರಿತು ಹೈಕಮಾಂಡ್ ಕೈಗೊಳ್ಳುವ ನಿರ್ಧಾರಕ್ಕೆ ಎಲ್ಲರೂ ಬದ್ಧ. ಪಂಚಾಯಿತಿ ಚುನಾವಣೆಗಳಲ್ಲಿ ಯಾವ ಕ್ಷೇತ್ರಗಳಲ್ಲಿ ಬಿಜೆಪಿ ಅಥವಾ ಜೆಡಿಎಸ್ ಗೆಲುವು ಸಾಧಿಸಬಹುದು ಎಂಬುದನ್ನು ಸಮೀಕ್ಷೆಗಳಿಂದ ಅರಿತು ಟಿಕೆಟ್ ಹಂಚಿಕೆ ಮಾಡಲಾಗುತ್ತದೆ ಎಂದು ಮಾಜಿ ಶಾಸಕ ಪ್ರೀತಂ ಜೆ. ಗೌಡ ಹೇಳಿದರು.



ತಾಲೂಕಿನ ಶ್ರವಣಬೆಳಗೊಳದಲ್ಲಿ ಶುಕ್ರವಾರ ಶ್ರವಣಬೆಳಗೊಳ ಮಂಡಲದ ವತಿಯಿಂದ ಆಯೋಜಿಸಿದ್ದ ಹೋಬಳಿ ಮಟ್ಟದ ಸಂಘಟನಾ ಪರ್ವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕೇವಲ ಪ್ರಾಬಲ್ಯದ ಆಧಾರದಲ್ಲಿ ಟಿಕೆಟ್ ಹಂಚಿಕೆ ಮಾಡುವುದಿಲ್ಲ. ಮುಂಬರುವ ಗ್ರಾಮ ಪಂಚಾಯಿತಿ ತಾಲೂಕು ಪಂಚಾಯಿತಿ ಜಿಲ್ಲಾ ಪಂಚಾಯತಿ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಗೆ ಸಂಬಂಧಿಸಿ ಕಾರ್ಯಕರ್ತರ ಅಭಿಪ್ರಾಯವನ್ನು ಪಕ್ಷದ ರಾಜ್ಯಾಧ್ಯಕ್ಷರು ಹಾಗೂ ಕೋರ್ ಕಮಿಟಿ ಗಮನಕ್ಕೆ ತರಲಾಗುವುದು. ಅಲ್ಲಿ ವ್ಯಕ್ತವಾಗುವ ಅಭಿಪ್ರಾಯವನ್ನು ದೆಹಲಿಗೆ ಕಳುಹಿಸಲಾಗುತ್ತದೆ. ಅಂತಿಮವಾಗಿ ರಾಷ್ಟ್ರೀಯ ಅಧ್ಯಕ್ಷರು, ಪ್ರಧಾನಿ ನರೇಂದ್ರ ಮೋದಿ ಹಾಗು ಕೇಂದ್ರ ಗೃಹ ಸಚಿವ ಅಮಿತ್ ಶಾ ಅಂತಿಮ ನಿರ್ಧಾರ ಕೈಗೊಳ್ಳುತ್ತಾರೆ ಎಂದು ಹೇಳಿದರು.

ರಾಜ್ಯದಲ್ಲಿ ಬಿಜೆಪಿಯನ್ನು ಪುನಃ ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಬೂತ್ ಮಟ್ಟದಲ್ಲಿ ಪಕ್ಷ ಸಂಘಟಿಸಲಾಗುತ್ತಿದೆ. ಕಾರ್ಯಕರ್ತರಿಗೆ ಶಕ್ತಿ ತುಂಬುವುದೇ ಬಿಜೆಪಿ ಮುಖ್ಯ ಗುರಿ ಎಂದ ಅವರು, ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯ ವಿಚಾರ ನಮ ಹೈಕಮಾಂಡ್ ನೋಡಿಕೊಳ್ಳುತ್ತದೆಂದರು. ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಪಕ್ಷವನ್ನು ಸಜ್ಜುಗೊಳಿಸಲು ರಾಜ್ಯಾಧ್ಯಕ್ಷರು ನಿರ್ಧಾರ ಕೈಗೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಎಲ್ಲಾ ರಾಜ್ಯ ಪ್ರಧಾನ ಕಾರ್ಯದರ್ಶಿಗಳಿಗೆ ರಾಜ್ಯಾದ್ಯಂತ ಪ್ರವಾಸ ನಡೆಸುವಂತೆ ಸೂಚಿಸಲಾಗಿದೆ. ಹಲವು ಜಿಲ್ಲೆಗಳಲ್ಲಿ ವಿಧಾನಸಭಾ ಕ್ಷೇತ್ರವಾರು ಸಂಘಟನೆಗೆ ಒತ್ತು ನೀಡಲಾಗಿದೆ. ಕಾರ್ಯಕರ್ತರ ಸಭೆ ನಡೆಸಿ ಪಕ್ಷ ಬಲಪಡಿಸುವ ಕೆಲಸ ನಡೆಯುತ್ತಿದೆ. ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದಲ್ಲಿ ಜಿಲ್ಲಾ ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಅತಿ ಹೆಚ್ಚು ಬಿಜೆಪಿ ಪಕ್ಷದ ಸದಸ್ಯರು ಆಯ್ಕೆ ಮಾಡುವ ನಿಟ್ಟಿನಲ್ಲಿ ಪಕ್ಷ ಸಂಘಟನೆ ಮಾಡೋಣ ಎಂದು ಕಾರ್ಯಕರ್ತರಿಗೆ ಸೂಚಿಸಿದರು ಎಂದರು.

ಬಿಜೆಪಿ ತಾಲ್ಲೂಕು ಅಧ್ಯಕ್ಷ ಪರಮ ಗಂಗಾಧರ್, ಗ್ರಾಮ ಪಂಚಾಯಿತಿ ಸದಸ್ಯ ಸಂಗೀತ ರೂಪೇಶ್, ಪ್ರಮುಖರಾದ ನಾಗೇಶ್ ಗೌಡ, ಕೆರೆ ಬೀದಿ ಜಗದೀಶ್, ಧರಣೇಶ್ ಹಾಗೂ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

## ಯುಪಿಎಸ್ಸಿ ಪರೀಕ್ಷೆ: ಜಿಲ್ಲೆಯ ಇಬ್ಬರು ಯುವಕರ ಸಾಧನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಇಬ್ಬರು ಯುವಕರು ಯುಪಿಎಸ್ಸಿ ಪರೀಕ್ಷೆಯಲ್ಲಿ ರ್‍ಯಾಂಕ್ ಪಡೆದು ಕೀರ್ತಿ ತಂದಿದ್ದಾರೆ.

ಬೇಲೂರು ಪುರಸಭೆ ಬಿಲ್ ಕಲೆಕ್ಟರ್ ಆನಂದ್ ಅವರ ಪುತ್ರ ಡಾ. ಎಂ.ಎ.ಯತೀಶ್ ಯುಪಿಎಸ್ಸಿ ಪರೀಕ್ಷೆಯಲ್ಲಿ 732ನೇ ರ್‍ಯಾಂಕ್ ಪಡೆದಿದ್ದಾರೆ. ವೈದ್ಯಕೀಯ ವಿದ್ಯಾಭ್ಯಾಸ ಪೂರ್ಣಗೊಳಿಸಿರುವ ಅವರು ಲೋಕಸೇವಾ ಆಯೋಗ ಪರೀಕ್ಷೆಗೆ ತಯಾರಿ ಕೈಗೊಂಡಿದ್ದರು.

ಸಕಲೇಶಪುರ ತಾಲೂಕಿನ ಗುರ್ಜನಹಳ್ಳಿ ಗ್ರಾಮದ ಜಿ.ಎಸ್.ಮನೋಜ್ 389ನೇ ರ್‍ಯಾಂಕ್ ಪಡೆದು ಭಾರತೀಯ ಪೊಲೀಸ್ ಸೇವೆ (ಐಪಿಎಸ್)ಗೆ ಆಯ್ಕೆಯಾಗಿದ್ದಾರೆ. ಕೃಷಿ ಕುಟುಂಬದ ಮನೋಜ್ ಅವರು ಇಂಜಿನಿಯರಿಂಗ್ ಮುಗಿಸಿ ಯುಪಿಎಸ್ಸಿಪರೀಕ್ಷೆಗೆ ತಯಾರಿ ನಡೆಸುತ್ತಿದ್ದರು.

ತಂದೆ ಶೇಖರ್ ಕೃಷಿಕರಾಗಿದ್ದು, ತಾಯಿ ನಿಧನರಾಗಿದ್ದಾರೆ. ಗ್ರಾಮೀಣ ಹಿನ್ನಲೆಯಿಂದ ಬಂದ ಮನೋಜ್ ತಮ ಪರಿಶ್ರಮ ಮತ್ತು ದೃಢ ಸಂಕಲ್ಪದ ಮೂಲಕ ಸಾಧನೆ ಮಾಡಿದ್ದಾರೆ. 1 ರಿಂದ 3ನೇ ತರಗತಿ ವರೆಗೆ ಅರಕಲಗೂಡು ತಾಲ್ಲೂಕಿನ ಮಲ್ಲಿಪಟ್ಟಣದ ಮಲ್ನಾಡ್ ಶಾಲೆ, 4 ಮತ್ತು 5ನೇ ತರಗತಿಯನ್ನು ಸಕಲೇಶಪುರ ಪಟ್ಟಣದ ಸಂತ ಜೋಸೆಫರ ಶಾಲೆಯಲ್ಲಿ ಪೂರ್ಣಗೊಳಿಸಿದರು. 6ನೇ ತರಗತಿಯಿಂದ ಪಿಯುಸಿ ವರೆಗೆ ಮಾವಿನಕೆರೆಯ ಜವಾಹರ್ ನವೋದಯ ವಿದ್ಯಾಲಯದಲ್ಲಿ ಶಿಕ್ಷಣ ಪಡೆದರು. ನಂತರ ಇಂಜಿನಿಯರಿಂಗ್ ಪದವಿ ಪೂರ್ಣಗೊಳಿಸಿ ಯುಪಿಎಸ್‌ಸಿ ಪರೀಕ್ಷೆಗೆ ತಯಾರಿ ನಡೆಸಿ ಇದೀಗ ಉತ್ತಮ ರ್‍ಯಾಂಕ್‌ನೊಂದಿಗೆ ಐಪಿಎಸ್ ಸೇವೆಗೆ ಆಯ್ಕೆಯಾಗಿದ್ದಾರೆ. ಮನೋಜ್ ಅವರ ಸಾಧನೆಗೆ ಮಾಜಿ ಸಚಿವ ಹೆಚ್.ಕೆ.ಕುಮಾರಸ್ವಾಮಿ, ಮುಖಂಡರು, ಸಾರ್ವಜನಿಕರು, ಸ್ನೇಹಿತರು ಹಾಗೂ ಶಿಕ್ಷಣ ಸಂಸ್ಥೆಗಳ ಶಿಕ್ಷಕರು ಅಭಿನಂದನೆ ಸಲ್ಲಿಸಿದ್ದಾರೆ.

## ಸತ್ಯಸಾಯಿ ಪ್ರೇಮ ಪ್ರವಾಹಿನಿ ರಥಕ್ಕೆ ಅದ್ದೂರಿ ಸ್ವಾಗತ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಶ್ರೀ ಸತ್ಯಸಾಯಿ ಬಾಬಾ ಅವರ 100ನೇ ಜನ ವಾರ್ಷಿಕೋತ್ಸವದ ಪ್ರಯುಕ್ತ ದೇಶಾದ್ಯಂತ ಸಂಚರಿಸುತ್ತಿರುವ ಶ್ರೀ ಸತ್ಯಸಾಯಿ ಪ್ರೇಮ ಪ್ರವಾಹಿನಿ ರಥಯಾತ್ರೆಗೆ ಅದ್ದೂರಿ ಸ್ವಾಗತ ಕೋರಲಾಯಿತು.



ಆಂಧ್ರಪ್ರದೇಶದ ಪುಟ್ಟಪರ್ತಿಯಿಂದ ಆರಂಭಗೊಂಡ ಈ ರಥಯಾತ್ರೆ ಶಿವಮೊಗ್ಗ, ಚಿಕ್ಕಮಗಳೂರು ಮಾರ್ಗವಾಗಿ ಜಿಲ್ಲೆ ಪ್ರವೇಶಿಸಿದೆ. ದೇಶದಾದ್ಯಂತ ಸುಮಾರು 50,000 ಗ್ರಾಮಗಳನ್ನು ಸಂಚರಿಸಿ 3,50,000 ಕಿ.ಮೀ. ಯಾತ್ರೆ ಪೂರ್ಣಗೊಳಿಸಿದೆ.

ಶ್ರವಣಬೆಳಗೊಳ ಹೋಬಳಿಯ ಕೊತ್ತನಘಟ್ಟದಲ್ಲಿ ಅರ್ಥಪೂರ್ಣವಾಗಿ ಸ್ವಾಗತಿಸಲಾಯಿತು. ಕೆಂಪೇಗೌಡ ವೃತ್ತದ ಬಳಿಯಿಂದ ಪೂರ್ಣಕುಂಭ, ಕಳಸ, ವೇದಘೋಷ , ಮಂಗಳವಾದ್ಯ, ಕಲಾಮೇಳ, ಚಿಣ್ಣರ ವಿವಿಧ ವೇಷ ಭೂಷಣ, ಭಜನೆಯೊಂದಿಗೆ ಪಟ್ಟಣದ ಪ್ರಮುಖ ಬೀದಿಯಲ್ಲಿ ರಥದ ಮೆರವಣಿಗೆ ನಡೆಯಿತು. ಪಟ್ಟಣದ ಕೆಂಪೇಗೌಡ ವೃತ್ತದಿಂದ ಸಾಂಸ್ಕೃತಿಕ ಕಲಾ ತಂಡಗಳೊಂದಿಗೆ ಮೆರವಣಿಗೆ ಸಾಗಿತು. ಪಟ್ಟಣದ ಸಿಜಿಎಂಆರ್ ಕಲ್ಯಾಣ ಮಂಟಪದಲ್ಲಿ ಸಭಾ ಕಾರ್ಯಕ್ರಮ ನಡೆಯಿತು. ಶ್ರೀ ಸತ್ಯಸಾಯಿ ಸೇವಾ ಸಂಸ್ಥೆಗಳ ಜಿಲ್ಲಾಧ್ಯಕ್ಷ ಡಾ.ಕೆ.ಆರ್.ನಾಗರಾಜ್ ಮಾತನಾಡಿ, ದೇಶಾದ್ಯಂತ ಐದು ರಥಗಳು ಸಂಚರಿಸುತ್ತಿದ್ದು, ಅವುಗಳಲ್ಲಿ ಒಂದು ರಥ ಪಟ್ಟಣಕ್ಕೆ ಆಗಮಿಸಿದೆ. ಭಕ್ತರ ಉತ್ಸಾಹ ಹಾಗು ಭಾವನಾತಕ ಸ್ವಾಗತ ಸಂತೋಷ ತಂದಿದೆ. ಸಾರ್ವಜನಿಕರು, ಮಾಧ್ಯಮಗಳು ಹಾಗೂ ಪೊಲೀಸ್ ಇಲಾಖೆಯವರು ಸಹಕಾರ ನೀಡಿದ್ದಾರೆ ಎಂದರು.

ವೇದ ಘೋಷ, ಬಾಲ ವಿಕಾಸ ಮಕ್ಕಳಿಂದ ಭರತ ನಾಟ್ಯ, ವಿಷ್ಣು, ಲಲಿತಾ ಸಹಸ್ರನಾಮ, ಸ್ವಾಮಿಯ ಸಂದೇಶ, ಶ್ರೀ ಸತ್ಯಸಾಯಿ ಸೇವಾ ಸಂಸ್ಥೆಯ ಯುವಕರಿಂದ ಗೀತಾ ಕಾರ್ಯಕ್ರಮ, ದಿವ್ಯ ದರ್ಶನ, ಪಾದ ನಮಸ್ಕಾರ, ಮಹಾ ಮಂಗಳಾರತಿ ಬಳಿಕ ಪ್ರಸಾದ ವಿನಿಯೋಗ ನಡೆಯಿತು.

## ರಾಯಪುರ ಗ್ರಾಮದಲ್ಲಿ ರಸ್ತೆ ತಡೆದು ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತಾಲ್ಲೂಕಿನ ರಾಯಪುರ ಸಮೀಪ ಇರುವ ಬಾರ್ ಎದುರು ವೀರಾಪುರ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.



ಗ್ರಾಮದ ದೊರೆಸ್ವಾಮಿ (43) ಎಂಬುವವರ ಸಾವಿನ ಕಾರಣ ತಿಳಿಸಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಬಾರ್‌ನಲ್ಲಿ ಕೆಲಸ ಮಾಡಿಕೊಂಡಿದ್ದ ವೀರಾಪುರ ಗ್ರಾಮದ ದೊರೆಸ್ವಾಮಿ (42) ಎಂಬುವವರು ಗುರುವಾರ ಮೃತಪಟ್ಟಿದ್ದರು. ದೊರೆಸ್ವಾಮಿ ಸಾವಿಗೆ ನಿಖರ ಕಾರಣ ಏನೆಂದು ತಿಳಿಯಲು ಶುಕ್ರವಾರ ಸಂಬಂಧಿಕರು ಹಾಗು ಗ್ರಾಮಸ್ಥರು ಬಾರ್‌ಗೆ ಭೇಟಿ ನೀಡಿದಾಗ ಮಾಲೀಕರು ಸ್ಪಂದಿಸಲಿಲ್ಲ ಎನ್ನಲಾಗಿದೆ. ಈ ಹಿನ್ನಲೆಯಲ್ಲಿ ಆಕ್ರೋಶಗೊಂಡ ಜನರು ರಸ್ತೆ ತಡೆದು ಪ್ರತಿಭಟಿಸಿದರು. ದಿಢೀರ್ ಪ್ರತಿಭಟನೆಯಿಂದ ಕೆಲಕಾಲ ವಾಹನ ಸಂಚಾರದಲ್ಲಿ ವ್ಯತ್ಯಯವಾಯಿತು. ಮೃತರಿಗೆ ಹೆಂಡತಿ, ಮೂವರು ಮಕ್ಕಳಿದ್ದಾರೆ.

ದೊರೆಸ್ವಾಮಿ ಅವರದ್ದು ಆಕಸಿಕ ಸಾವಲ್ಲ. ದುರುದ್ದೇಶದಿಂದ ಕೊಲೆ ಮಾಡಿ ಶವವನ್ನು ಕಾರಿನಲ್ಲಿಡಲಾಗಿದೆ. ಪ್ರಕರಣದ ಸಮಗ್ರ ತನಿಖೆ ನಡೆಸಬೇಕು. ಬಾರ್‌ನ ಒಳಗೆ ಹಾಗು ಆವರಣದ ಸಿಸಿಟಿವಿ ಕ್ಯಾಮರಾ ಪರಿಶೀಲಿಸಿದರೆ ಸತ್ಯ ತಿಳಿಯುತ್ತದೆಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆ ಗ್ರಾಮಾಂತರ ಠಾಣೆ ಪೊಲೀಸರು ದೌಡಾಯಿಸಿ ಪರಿಸ್ಥಿತಿ ನಿಯಂತ್ರಣಕ್ಕೆ ಹರಸಾಹಸಪಟ್ಟರು. ಈ ವೇಳೆ ಪೊಲೀಸರು ಮತ್ತು ಗ್ರಾಮಸ್ಥರ ನಡುವೆ ವಾಗ್ವಾದ ಸಹ ನಡೆಯಿತು.

ಮೃತ ದೊರೆಸ್ವಾಮಿ ಸಂಬಂಧಿ ಸರೋಜ ಮತ್ತು ರಜಿನಿ ಮಾತನಾಡಿ, ದೊರೆಸ್ವಾಮಿ ಬಳಿ 3 ಲಕ್ಷ ರೂ. ಹಣವಿತ್ತು. ಅವರನ್ನು ಕೊಂದು ಹಣ ದೋಚಿದ್ದಾರೆ. ಈ ಬಗ್ಗೆ ತನಿಖೆ ನಡೆಸಬೇಕೆಂದು ಆಗ್ರಹಿಸಿದರು. ಪೊಲೀಸರ ಸಂಧಾನದ ಬಳಿಕ ಪ್ರತಿಭಟನೆ ವಾಪಾಸ್ ಪಡೆಯಲಾಯಿತು.

## ಸಮಾಜಮುಖಿ ಕೆಲಸಗಳಿಂದ ಮಹಾನ್ ವ್ಯಕ್ತಿಗಳು ಅಮರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸಮಾಜಮುಖಿ ಬದುಕಿನ ಮೂಲಕವೇ ಮಹಾನ್ ವ್ಯಕ್ತಿಗಳು ಶತಮಾನಗಳ ಬಳಿಕವೂ ಜನಮನದಲ್ಲಿ ಉಳಿಯುತ್ತಾರೆ ಎಂದು ಚಿಂತಕ ಚಕ್ರವರ್ತಿ ಸೂಲಿಬೆಲೆ ಹೇಳಿದರು.

ತಾಲ್ಲೂಕಿನ ಬಾಳ್ಳುಪೇಟೆ ಗ್ರಾಮದಲ್ಲಿ ಸ್ನೇಹ ಬಳಗದ ವತಿಯಿಂದ ನಡೆದ ಡಾ. ಶಿವಕುಮಾರ ಸ್ವಾಮೀಜಿ ಅವರ 7ನೇ ವರ್ಷದ ಪುಣ್ಯಸರಣೆ ಕಾರ್ಯಕ್ರಮದಲ್ಲಿ ಮಾತನಾಡಿದ



ಅವರು, ಡಾ. ಶಿವಕುಮಾರ ಸ್ವಾಮೀಜಿ 112 ವರ್ಷಗಳ ಕಾಲ ಅಕ್ಷರ ಮತ್ತು ಅನ್ನ ದಾಸೋಹಕ್ಕಾಗಿ ಜೀವನವನ್ನೇ ಸಮರ್ಪಿಸಿದ್ದರಿಂದಲೇ ಇಂದಿಗೂ ಜನಮನದಲ್ಲಿ ಜೀವಂತವಾಗಿದ್ದಾರೆ ಎಂದರು.

ಸಿದ್ಧಗಂಗಾ ಮಠದ ಶಿವಸಿದ್ದೇಶ್ವರ ಸ್ವಾಮೀಜಿ ಮಾತನಾಡಿ, ಮಲೆನಾಡು ಭಾಗದಲ್ಲಿ ಕಾಡಾನೆ ದಾಳಿಯಿಂದ ರೈತರು ಸಂಕಷ್ಟ ಅನುಭವಿಸುತ್ತಿದ್ದು, ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಹಿಡಿಯಲು ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಹೇಳಿದರು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ಶಿವಕುಮಾರ ಸ್ವಾಮೀಜಿ ನಡೆದಾಡುವ ದೇವರು ಎಂಬುದು ಸತ್ಯವಾಗಿದ್ದು, ಅವರ ಸಂದೇಶ ಮತ್ತು ಜೀವನ ಎಲ್ಲರಿಗೂ ಸ್ಫೂರ್ತಿಯಾಗಿದೆ ಎಂದರು. ಕಾರ್ಯಕ್ರಮದಲ್ಲಿ ಯಡೇಹಳ್ಳಿ ಆರ್. ಮಂಜುನಾಥ್ ಕವನ ವಾಚನ ಮಾಡಿದರು. ವಿವಿಧ ಮಠಾಧೀಶರು, ರಾಜಕೀಯ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ಪುಣ್ಯಸರಣೆ ಅಂಗವಾಗಿ ರಕ್ತದಾನ ಶಿಬಿರವೂ ನಡೆಯಿತು.

# ಗಮನ ಸೆಳೆದ ಸರ್ಕಾರಿ ಶಾಲೆಯ ಮಕ್ಕಳ ಮನೆ ವಾರ್ಷಿಕೋತ್ಸವ

## ಶಾಲೆಯತ್ತ ಮಕ್ಕಳನ್ನು ಆಕರ್ಷಿಸುವ ಯೋಜನೆ | ಶಾಸಕ ಎ.ಮಂಜು ವಿಶೇಷ ಪ್ರಯತ್ನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಶಿಕ್ಷಣ ಇಲಾಖೆ ಶೈಕ್ಷಣಿಕ ಸಾಲಿನ ಅಂತಿಮ ಹಂತದಲ್ಲಿಯೇ ಸರ್ಕಾರಿ ಶಾಲೆಗಳಿಗೆ ಮಕ್ಕಳ ದಾಖಲಾತಿಯನ್ನು ವೃದ್ಧಿಸಿಕೊಳ್ಳುವ ಸಲುವಾಗಿ ಸರ್ಕಾರಿ ಶಾಲೆಗಳಲ್ಲಿ ದೊರೆಯುವ ಸವಲತ್ತು, ಮಕ್ಕಳ ಕ್ರೀಡಾ ಕ್ಷೇತ್ರದಲ್ಲಿನ ಸಾಧನೆ, ಬಿಸಿಯೂಟ ಯೋಜನೆಯ ಪ್ರಯೋಜನ ಹಾಗೂ ತಾಂತ್ರಿಕವಾಗಿ ಕೈಗೊಂಡಿರುವ ವಿಜ್ಞಾನ ಪ್ರಯೋಗ ಲ್ಯಾಬ್ ಸೇರಿ ಇತರೆ ಪರಿಕರಗಳನ್ನು ಶಿಕ್ಷಕರ ಭವನದ ಆವರಣದಲ್ಲಿ ಸ್ಟಾಲ್‌ಗಳಲ್ಲಿ ನಿರ್ಮಿಸಿ ಪೋಷಕರನ್ನು ಆಕರ್ಷಿಸುವಲ್ಲಿ ಯಶಸ್ವಿಯಾಯಿತು.



ಪಟ್ಟಣ ಸೇರಿ ತಾಲೂಕಿನಾದ್ಯಂತ ಶಾಸಕರ ಪತ್ನಿ ತಾರಾ ಮಂಜುಗೌಡ ಅವರ ದೇವರ ಹಟ್ಟಿ ಟ್ರಸ್ಟ್ ಸಹಯೋಗದಲ್ಲಿ ಆರಂಭಿಸಿರುವ ಮಕ್ಕಳ ಮನೆಯ ಪುಟಾಣಿಗಳ ವಾರ್ಷಿಕೋತ್ಸವವನ್ನು ಅದ್ದೂರಿಯಾಗಿ ಆಯೋಜನೆ ಮಾಡಿ ಅಲ್ಲಿ ಕಲಿಯುತ್ತಿರುವ ಮಕ್ಕಳು ಸರ್ಕಾರಿ ಶಾಲೆಯಲ್ಲಿಯೇ ಮುಂದುವರಿಸಲು ಉತ್ತೇಜಿಸುವ ಕಾರ್ಯಕ್ರಮವನ್ನು ಸಹ ಆಯೋಜನೆ ಮಾಡಲಾಗಿತ್ತು.

ದಾಖಲಾತಿ ಆಂದೋಲನಾ ಸಲುವಾಗಿ ಇಡೀ ಶಿಕ್ಷಕರ ಪ್ರಾವಿಣ್ಯತೆಯನ್ನು ಪೋಷಕರಲ್ಲಿ ನಂಬಿ ಮೂಡಿಸುವ ಸಲುವಾಗಿ ಸ್ಟಾಲ್‌ಗಳಲ್ಲಿ ಇರಿಸಿದ್ದ ಶೈಕ್ಷಣಿಕ ಪರಿಕರಗಳ ಪರಿಚಯ ಮತ್ತು ಅವುಗಳಿಂದ ಮಕ್ಕಳಿಗೆ ಪ್ರಯೋಜನವಾಗುವ ವಿಷಯಗಳನ್ನು ಸಹ ತಿಳಿಸುವ ಕೆಲಸ ನಡೆಯಿತು. ಪೋಷಕರು, ವಿದ್ಯಾರ್ಥಿಗಳು ಸ್ಟಾಲ್‌ಗಳಲ್ಲಿನ ಪರಿಕರಗಳನ್ನು ವೀಕ್ಷಣೆ ಮಾಡಿ ಸಂತಸಗೊಂಡರು. ಅಲ್ಲದೆ ಸರಕಾರಿ ಶಾಲೆಗೆ ಸೇರಿಸುವ ಮಕ್ಕಳನ್ನು ಸೇರಿಸುವ ವಿಶ್ವಾಸದ ಇಂಗಿತವನ್ನು ಪುಸ್ತಕದಲ್ಲಿ ಸಹಿ ಮಾಡುವ ಮೂಲಕ ಭರವಸೆ ನೀಡಿದ್ದು ವಿಶೇಷವಾಗಿತ್ತು.

ಶಾಸಕರ ಧರ್ಮಪತ್ನಿ ತಾರಾ ಮಂಜುಗೌಡ ಉದ್ಘಾಟಿಸಿದರು. ವಿಧಾನಸಭಾ ಕ್ಷೇತ್ರದ ಪ್ರತಿ ಗ್ರಾಪಂ ವ್ಯಾಪ್ತಿಯಲ್ಲಿ ಮಕ್ಕಳ ಮನೆ ತೆರೆಯುವ ಉದ್ದೇಶವನ್ನು ಹೊಂದಲಾಗಿದೆ.

ಈಗಾಗಲೇ 18 ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಮನೆ ಕಾರ್ಯನಿರ್ವಹಿಸುತ್ತಿವೆ. ಸುಮಾರು 300 ಮಕ್ಕಳು ಎಲ್‌ಕೆಜಿ, ಯುಕೆಜಿ ಕಲಿಯುತ್ತಿದ್ದಾರೆ. ಈ ಶಾಲೆಗಳಿಗೆ ಬೇಕಿರುವ ಅಗತ್ಯತೆಗಳನ್ನು ದೇವರ ಹಟ್ಟಿ ಟ್ರಸ್ಟ್ ವತಿಯಿಂದ ಒದಗಿಸಲಾಗುತ್ತಿದೆ ಎಂದು ಹೇಳಿದರು.

ಶಾಸಕ ಎ.ಮಂಜು ಮಾತನಾಡಿ, ದೇಶದ ಅಭಿವೃದ್ಧಿಗೆ ಶಿಕ್ಷಣ ಅತೀ ಮುಖ್ಯವಾಗಿದೆ. ಈ ಸಲುವಾಗಿ ನಮ ಟ್ರಸ್ಟ್ ವತಿಯಿಂದ ಮಕ್ಕಳ ಮನೆ ಆರಂಭಿಸಿ ಪ್ರೋತ್ಸಾಹಿಸುತ್ತಿದ್ದೇವೆ. ಇದು ಸರ್ಕಾರಿ ಶಾಲೆಗಳ ಉಳಿವು ಅಭಿವೃದ್ಧಿಗೆ ಉತ್ತೇಜಿತವಾಗಿದೆ ಎಂದು ತಿಳಿಸಿದರು.

ಇನ್ನಾದರೂ ಪೋಷಕರು ಖಾಸಗಿ ಶಾಲೆಗಳ ವ್ಯಾಮೋಹ ಬಿಡಿ ಅತೀ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿರುವುದನ್ನು ಪಡೆದುಕೊಳ್ಳಿ, ಮಕ್ಕಳ ಮನೆಯಿಂದ ಸರ್ಕಾರಿ ಶಾಲೆ ಕಡೆ ಗಮನ ಸೆಳೆಯುವ ಉದ್ದೇಶ ಹಾಗು ಉತಮ ಶಿಕ್ಷಣ ನೀಡುವುದೇ ನಮ್ಮ ಪ್ರಮುಖ ಉದ್ದೇಶ. ಎಲ್ಲಾ ಪೋಷಕರು ಸರ್ಕಾರಿ ಶಾಲೆಗಳಿಗೆ ಮಕ್ಕಳನ ಸೇರಿಸುವಂತೆ ಮನವಿ ಮಾಡಿದರು.

ಬಿಗ್ ಬಾಸ್ ಖ್ಯಾತಿಯ ದ್ರುವಂತ್ ಮಾತನಾಡಿ, ಸರ್ಕಾರಿ ಶಾಲೆ ಉಳಿಸುವ ಇಂತಹ ಕಾರ್ಯಕ್ರಮ ರಾಜ್ಯದಲ್ಲೆ ಪ್ರಥಮ ಈ ಕಾರ್ಯಕ್ರಮಕ್ಕೆ ನಾನು ಎಂದು ಸ್ಪಂದಿಸುವೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಪಿ.ನಾರಾಯಣ ಮಾತನಾಡಿ, ಶಾಸಕರ ಸಹಕಾರದಿಂದ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ. ನಮ ಶಿಕ್ಷಕರು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಸಲುವಾಗಿಯೇ ಇಂದಿನಿಂದಲೇ ದಾಖಲಾತಿ ಆಂದೋಲನವನ್ನು ಹೋಬಳಿ ಮಟ್ಟದಲ್ಲಿ ಹಮಿಕೊಳ್ಳಲಾಗಿದೆ. ಮಕ್ಕಳ ಮನೆ ಪೂರ್ವ ಪ್ರಾಥಮಿಕ ಶಾಲೆಯಿಂದ ನಮ ಪ್ರಾಥಮಿಕ ಶಾಲೆಗಳಿಗೆ ಹೆಚ್ಚು ಪ್ರಯೋಜನವಾಗುತ್ತಿದೆ. ಕಳೆದ ವರ್ಷದಿಂದ ನಮ ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚುತ್ತಿದೆ. ಈ ಬಾರಿ ನಿರೀಕ್ಷಿತ ಮಟ್ಟದಲ್ಲಿ ದಾಖಲಾತಿ ಮಾಡುವ ವಿಶ್ವಾಸವನ್ನು ಹೊಂದಲಾಗಿದೆ ಎಂದು ಹೇಳಿದರು.

ಸಿಡಿಪಿಒ ವೆಂಕಟೇಶ್, ಅಕ್ಷರ ದಾಸೋಹ ಅಧಿಕಾರಿ ರಂಗಸ್ವಾಮಿ, ಡಾ.ಅಶೋಕ್ ಇದ್ದರು. ವಿಧಾನಸಭಾ ವ್ಯಾಪ್ತಿಯ 18 ಮಕ್ಕಳ ಮನೆಯ ಪುಟಾಣಿಗಳಿಂದ ವಿವಿಧ ನೃತ್ಯ, ರೂಪಕ, ಭಾಷಣ ಹಾಗೂ ಮಕ್ಕಳ ಮನೆ ಶಿಕ್ಷಕರಿಯಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

# ಅರಳೇಪೇಟೆ ಸರ್ಕಾರಿ ಶಾಲೆ ದಾಖಲೆ ಮಾಡಿಸಲು ಒತ್ತಾಯ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಉತ್ತರ ಬಡಾವಣೆ (ಅರಳೇಪೇಟೆ) ಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸ್ಥಳಕ್ಕೆ ಸಂಬಂಧಿಸಿದ ಭೂದಾಖಲೆಯನ್ನು ತಕ್ಷಣ ಮಾಡಿಸಬೇಕೆಂದು ಆಗ್ರಹಿಸಿ ಆಮ್ ಆದಿ ಪಕ್ಷದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಎಎಪಿ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೇಶ್ ಮಾತನಾಡಿ, ಅರಳೇಪೇಟೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ 1935ರಲ್ಲಿ ಸ್ಥಾಪನೆಯಾದ ಪುರಾತನ ಶಿಕ್ಷಣ ಸಂಸ್ಥೆಯಾಗಿದೆ. ಹಲವು ದಶಕಗಳಿಂದ ಸಾವಿರಾರು ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿದೆ. ಶಾಲೆಯ ಸ್ಥಾಪನೆಗೆ ಸಂಬಂಧಿಸಿದ ದಾಖಲೆಗಳಾಗಿ ಹಳೆಯ ವಿದ್ಯಾರ್ಥಿಗಳ ನೋಂದಣಿ ಪುಸ್ತಕಗಳು ಹಾಗು ಕೆಲವು ಕೈಬರಹದ ದಾಖಲೆಗಳು ಮಾತ್ರ ಲಭ್ಯವಿದೆ. ಆದರೆ, ಶಾಲೆಯ ಸ್ಥಳಕ್ಕೆ ಸಂಬಂಧಿಸಿದ ಅಧಿಕೃತ ಭೂ ದಾಖಲೆಗಳು ಇಲ್ಲದಿರುವುದು ಆತಂಕಕಾರಿ ಸಂಗತಿ ಎಂದು ಹೇಳಿದರು.

ಶಾಲೆಯ ಉದ್ದ, ಅಗಲ ಹಾಗು ಒಟ್ಟು ವಿಸ್ತೀರ್ಣದ ಕುರಿತು ಸರಿಯಾದ ದಾಖಲೆಗಳು ಇಲ್ಲದಿರುವುದರಿಂದ ಭವಿಷ್ಯದಲ್ಲಿ ಈ ಜಾಗದ ಮೇಲೆ ವಿವಾದ ಉಂಟಾಗುವ ಸಾಧ್ಯತೆ ಇದೆ. ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಚೇರಿ, ಜಿಲ್ಲಾ ಪಂಚಾಯಿತಿ ಹಾಗೂ ನಗರ ಪಾಲಿಕೆಯಲ್ಲೂ ಈ ಶಾಲೆಯ ಸ್ಥಳಕ್ಕೆ ಸಂಬಂಧಿಸಿದ ದೃಢೀಕೃತ ದಾಖಲೆಗಳು ಲಭ್ಯವಿಲ್ಲ. ನಗರ ಹೃದಯ ಭಾಗದಲ್ಲಿರುವ ಈ ಶಾಲೆಯ ಜಾಗ ಬೆಲೆ ಬಾಳುವುದರಿಂದ, ಮುಂದಿನ ದಿನಗಳಲ್ಲಿ ಕೆಲ ಪ್ರಭಾವಿ ವ್ಯಕ್ತಿಗಳು ಅಥವಾ ಖಾಸಗಿ ವ್ಯಕ್ತಿಗಳು ಈ ಜಾಗವನ್ನು ದುರುಪಯೋಗಪಡಿಸಿಕೊಳ್ಳುವ ಸಾಧ್ಯತೆ ಎಂದು ಹೇಳಿದರು.

ಜಿಲ್ಲಾಡಳಿತ ಹಾಗು ಸಂಬಂಧಪಟ್ಟ ಇಲಾಖೆಗಳು ಕೂಡಲೇ ಗಮನಹರಿಸಿ ಶಾಲೆಯ ಸ್ಥಳವನ್ನು ಸರ್ವೇ ಮಾಡಿಸಿ, ಒಟ್ಟು ವಿಸ್ತೀರ್ಣವನ್ನು ದಾಖಲೆಗಳಲ್ಲಿ ಸ್ಪಷ್ಟವಾಗಿ ನಮೂದಿಸಿ ಶಾಲೆಯ ಹೆಸರಿಗೆ ಭೂ ದಾಖಲೆಗಳನ್ನು ಮಾಡಿಸಬೇಕೆಂದು ಒತ್ತಾಯಿಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು. ಪಕ್ಷದ ಮುಖಂಡರಾದ ಆನಂದ್ ತೇಜೂರು, ಮಂಜಣ್ಣ, ಮಧು, ಶಂಕರ್ ಸೇರಿ ಇತರರು ಉಪಸ್ಥಿತರಿದ್ದರು.

# ರೋಟರಿಗೆ 500 ಸದಸ್ಯತ್ವ ಹೆಮ್ಮೆಯ ವಿಚಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶಾಲಾ-ಕಾಲೇಜು ಹಂತದಲ್ಲಿ ಮಕ್ಕಳನ್ನು ಸಾಮಾಜಿಕ ಸೇವೆಯಲ್ಲಿ ತೊಡಗುವಂತೆ ಮಾಡಲು ರೋಟರಿ ಇಂಟ್ರ್ಯಾಕ್ಟ್ ಹಾಗೂ ರೋಟ್ರ್ಯಾಕ್ಟ್ ಕ್ಲಬ್‌ಗಳನ್ನು ಆರಂಭಿಸಲಾಗಿದ್ದು, ಟೈಮ್ಸ್ ಶಾಲೆಯಲ್ಲಿ ಈ ವರ್ಷ ಸುಮಾರು 500ಕ್ಕೂ ಅಧಿಕ ಮಕ್ಕಳು ರೋಟರಿ ಸದಸ್ಯರಾಗಿರುವುದು ಸಂತಸದ ವಿಷಯ ಎಂದು ರೋಟರಿ ಜೋನ್ 9ರ ಸಹಾಯಕ ಗವರ್ನರ್ ಮಂಜುನಾಥ್ ಹೇಳಿದರು.

ನಗರದ ವಿಜಯನಗರ ಬಡಾವಣೆಯಲ್ಲಿರುವ ಟೈಮ್ಸ್ ಅಂತರಾಷ್ಟ್ರೀಯ ಶಾಲೆಯಲ್ಲಿ ಶುಕ್ರವಾರ ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ವತಿಯಿಂದ ನಡೆದ ಇಂಟ್ರ್ಯಾಕ್ಟ್ ಕ್ಲಬ್‌ನ ನೂತನ ಅಧ್ಯಕ್ಷರು ಹಾಗೂ ಕಾರ್ಯದರ್ಶಿ ಮತ್ತು ಸದಸ್ಯರ ಪದಗ್ರಹಣ ಕಾರ್ಯಕ್ರಮದಲ್ಲಿ ನೂತನ ಅಧ್ಯಕ್ಷರಿಗೆ ಅಧಿಕಾರ ಹಸ್ತಾಂತರಿಸಿ ಮಾತನಾಡಿದ ಅವರು, ಶಾಲಾ-ಕಾಲೇಜು ಹಂತದಲ್ಲಿ ಮಕ್ಕಳಿಗೆ ಸಾಮಾಜಿಕ ಸೇವೆ, ಹೊಣೆಗಾರಿಕೆ, ಜವಬ್ದಾರಿಯಂತಹ ವಿಷಯಗಳ ಬಗ್ಗೆ ತಿಳಿಸಿಕೊಡುವ ಸಲುವಾಗಿ ಶಾಲಾ ಹಂತದಲ್ಲಿ ರೋಟರಿ ಇಂಟ್ರ್ಯಾಕ್ಟ್ ಕ್ಲಬ್ ಹಾಗೂ ಕಾಲೇಜು ಹಂತದಲ್ಲಿ ರೋಟರಿ ರೋಟ್ರ್ಯಾಕ್ಟ್ ಕ್ಲಬ್ ಆರಂಭಿಸಲಾಗುವುದು. ರೋಟರಿ ಕ್ಲಬ್ ಆಫ್ ಹಾಸನ ಸಂಸ್ಥೆಯು ಈ ವರ್ಷ ಹೊಸದಾಗಿ ಶಾಲಾ ಹಂತದಲ್ಲಿ ಇಂಟ್ರ್ಯಾಕ್ಟ್ ಕ್ಲಬ್ ಆರಂಭಿಸಿರುವುದು ಉತ್ತಮ ಕೆಲಸ. ಮುಂದಿನ ದಿನಗಳಲ್ಲಿ ಈ ಮಕ್ಕಳಿಗೆ ರೋಟರಿ ಪರಿಕಲ್ಪನೆಯ ಬಗ್ಗೆ ಕಾರ್ಯಾಗಾರ ಹಮಿಕೊಳ್ಳಲಾಗುವುದು ಎಂದರು. ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ಅಧ್ಯಕ್ಷ ಹಾಗೂ ಟೈಮ್ಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಕೆ. ಟೈಮ್ಸ್ ಗಂಗಾಧರ್ ಮಾತನಾಡಿ, ರೋಟರಿ ಒಂದು ಅಂತರಾಷ್ಟ್ರೀಯ ಸಂಸ್ಥೆಯಾಗಿದ್ದು, ಈಗಾಗಲೇ ಸಾಮಾಜಿಕ ಅನೇಕ ಕಾರ್ಯಗಳನ್ನು ಮಾಡಿಕೊಂಡು ಬಂದಿದೆ. ಶಾಲಾ ಹಂತದಲ್ಲಿ ಮಕ್ಕಳಿಗೆ ಸಮಾಜದ ಬಗೆಗೆ ತಿಳಿಸಿಕೊಡುವ ಉದ್ದೇಶ ಉತ್ತಮವಾಗಿದ್ದು, ಇಂದಿನ ಮಕ್ಕಳಿಗೆ ಇದು ಅನಿವಾರ್ಯವಾಗಿದೆ. ಹಾಗಾಗಿ ನಮ ಶಾಲೆಯಲ್ಲಿ ಈ ರೋಟರಿ ಇಂಟ್ರ್ಯಾಕ್ಟ್ ಕ್ಲಬ್ ಆರಂಭಿಸುವ ಮೂಲಕ ಅವರಿಗೆ ರೋಟರಿ ನಡೆಸಿಕೊಂಡು ಬಂದಿರುವ ಸಾಮಾಜಿಕ ಕೆಲಸಗಳ ಬಗ್ಗೆ ತಿಳಿಸಿಕೊಡುವುದರೊಂದಿಗೆ ಮುಂದಿನ ಅವರು ತಮ ಮನೆಯ ಸುತ್ತ ಮುತ್ತಲಿನ ಸಮಾಜವನ್ನು ಹೇಗೆ ಇರಿಸಿಕೊಳ್ಳಬೇಕು ಎಂಬುದರ ಬಗ್ಗೆ ತಿಳಿಸಿಕೊಡಲಾಗುವುದು ಎಂದರು.




## ಅಧಿಕಾರ ಹಸ್ತಾಂತರ

**ಟೈಮ್ಸ್ ಇಂಟ್ರ್ಯಾಕ್ಟ್ ಕ್ಲಬ್‌ನ ನೂತನ ಅಧ್ಯಕ್ಷರಾಗಿ ಟೈಮ್ಸ್ ಅಂತರಾಷ್ಟ್ರೀಯ ಶಾಲೆಯ 8ನೇ ತರಗತಿಯ ವಿದ್ಯಾರ್ಥಿ ಉದಯ್ ರಾಜ್ ಅವರು ಅಧಿಕಾರ ಸ್ವೀಕಾರ ಮಾಡಿದರು. ಶಾಲೆಯ 8ನೇ ತರಗತಿ ವಿದ್ಯಾರ್ಥಿನಿ ತೇಜಸ್ವಿನಿ ಅವರು ನೂತನ ಕಾರ್ಯದರ್ಶಿಯಾಗಿ ಅಧಿಕಾರ ಸ್ವೀಕಾರ ಮಾಡಿದರು.**

**ರೋಟರಿ ಜೋನ್ 9ರ ವಲಯ ಸೇನಾನಿ ಮಮತಾ ಪಾಟೀಲ್, ರೋಟರಿ ಕ್ಲಬ್ ಆಫ್ ಹಾಸನ ರಾಯಲ್‌ನ ಕಾರ್ಯದರ್ಶಿ ರವಿ ಕುಮಾರ್ ಪಿ., ಖಜಾಂಚಿ ದಿಲೀಪ್ ಕುಮಾರ್ ಎಚ್.ಕೆ., ಟೈಮ್ಸ್ ಶಾಲೆಯ ಮುಖ್ಯಶಿಕ್ಷಕಿ ಬ್ಲೆಸ್ಸಿಶಾಮ್, ಆಡಳಿತಾಧಿಕಾರಿ ಅರ್ಜುನ್, ಸಿಬ್ಬಂದಿ ಸುಮಂತ್ ಹಾಗೂ ಶಿಕ್ಷಕರು ಹಾಜರಿದ್ದರು.**

# ಗ್ರಾಮಗಳಲ್ಲಿ ಶಾಂತಿ ಕದಡುತ್ತಿರುವ ಅಬಕಾರಿ ಇಲಾಖೆ: ಆಕ್ರೋಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಅಬಕಾರಿ ಇಲಾಖೆ ಯಾವುದೇ ಮಾನದಂಡಗಳನ್ನು ಪಾಲಿಸದೆ ಎಲ್ಲೆಂದರಲ್ಲಿ ಮದ್ಯದಂಗಡಿಗಳಿಗೆ ಅನುಮತಿ ನೀಡಿ ಗ್ರಾಮೀನ ಭಾಗದಲ್ಲಿ ಸ್ವಾಸ್ಥ್ಯ ಹಾಳು ಮಾಡುತ್ತಿದೆ ಎಂದು ಶಾಸಕ ಹೆಚ್.ಕೆ. ಸುರೇಶ್ ಆಕ್ರೋಶ ವ್ಯಕ್ತಪಡಿಸಿದರು.




ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಕೆಡಿಪಿ ತ್ರೈಮಾಸಿಕ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿ, ಸರ್ಕಾರದ ಈ ನಿರ್ಧಾರ ಖಂಡಿಸಿ ಪ್ರತಿಭಟನೆ ನಡೆಸಬೇಕಾಗುತ್ತದೆ. ಮದ್ಯದಂಗಡಿ ತೆರೆಯಲು ಕೆಲ ಮಾನದಂಡಗಳಿವೆ. ಆದರೆ ಅಬಕಾರಿ ಇಲಾಖೆ ನಿಯಮಗಾಳಿಗೆ ತೂರಿ ವರಮಾನಕ್ಕೆ ಬಾಯಿ ತೆರೆದುಕೊಂಡು ಜನರ ಜೀವನದ ಜೊತೆಗೆ ಚೆಲ್ಲಾಟ ಆಡುತ್ತಿದ್ದಾರೆ. ನಮ ಕ್ಷೇತ್ರದ ಕೊಗಿಲೆಮನೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸದ್ಯ ತೆರೆಯಲಾದ ಮದ್ಯದಂಗಡಿಗೆ ವಿದ್ಯುತ್ ಸಂಪರ್ಕವಿಲ್ಲ. ಯಾವುದೇ ಮೂಲ ಮಾನದಂಡಗಳನ್ನು ಅನುಸರಿಸದೆ ಅನುಮತಿ ನೀಡುವ ಮಟ್ಟಕ್ಕೆ ಅಬಕಾರಿ ಇಲಾಖೆ ಬಂದಿದೆ. ಹಣ ನೀಡಿದರೆ ಏನು ಬೇಕಾದರೂ ನಡೆಸಲು ಇಲಾಖೆ ಅಧಿಕಾರಿಗಳು ಕುಮಕ್ಕು ನೀಡುತ್ತಿದ್ದಾರೆ. ಗ್ರಾಮೀಣ ಪ್ರದೇಶಗಳಿಗೆ ಪ್ರತಿನಿತ್ಯ ಪಟ್ಟಣದಿಂದ ಸರಬರಾಜು ನಡೆಸುತ್ತಿದ್ದಾರೆ. ಹಳ್ಳಿಗಳ ಚಿಲ್ಲರೆ ಅಂಗಡಿಗಳಲ್ಲಿ ರಾಜಾರೋಷವಾಗಿ ಮದ್ಯ ಮಾರಾಟದ ದೂರುಗಳು ವ್ಯಾಪಕವಾಗಿ ಬರುತ್ತಿದೆ. ಅಧಿಕಾರಿಗಳು ನೆಪ ಮಾತ್ರದ ಕರ್ತವ್ಯದಿಂದ ಹೊರಬಂದು ಜನರ ಬದುಕು ಉಳಿಸುವ ಕೆಲಸ ಮಾಡಿ ಎಂದು ಹೇಳಿದರು.

ತಾಲ್ಲೂಕಿನ ಬಹುತೇಕ ಸರ್ಕಾರಿ ಶಾಲೆಗಳ ಭೂಮಿ ಇತ್ತೀಚಿನ ದಿನದಲ್ಲಿ ಭೂಗಳ್ಳರ ಪಾಲಾಗುತ್ತಿರುವುದು ನಿಜಕ್ಕೂ ನೋವು ತಂದಿದೆ. ಇದಕ್ಕೆ ಇಲ್ಲಿನ ಅಧಿಕಾರಿಗಳ ಕಾರ್ಯವೈಖರಿ ವೈಫಲ್ಯವಾಗಿರುವುದು ಎದ್ದು ಕಾಣುವ ನಿಟ್ಟಿನಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶೀಘ್ರವೇ ಸರ್ಕಾರಿ ಶಾಲೆಗಳ ಜಾಗವನ್ನು ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ಮುಂದಾಗಬೇಕು ಎಂದ ಅವರು ಬೇಲೂರು ಪಟ್ಟಣದಲ್ಲಿ ಸದ್ಯ ನಗರೋತ್ಥಾನ ಹಾಗೂ ವಿವಿಧ ಯೋಜನೆಗಳಿಂದ ಕಾಮಗಾರಿ ನಡೆಯುತ್ತಿದೆ. ಕಾಮಗಾರಿ ಗುಣಮಟ್ಟದಲ್ಲಿ ಯಾವುದೇ ರಾಜಿ ಸಂಧಾನವಿಲ್ಲ ಎಂದು ಸ್ಪಷ್ಟಪಡಿಸಿದರು.

ಮಾ. 23 ರಂದು ಐತಿಹಾಸಿಕ ಬೇಲೂರು ಚನ್ನಕೇಶವಸ್ವಾಮಿ ಜಾತ್ರಾ ಮಹೋತ್ಸವ ಆರಂಭವಾಗುವ ನಿಟ್ಟಿನಲ್ಲಿ ಪಟ್ಟಣದಲ್ಲಿ ನಡೆಯುವ ಕಾಮಗಾರಿ ಪೂರ್ಣಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ಬೇಲೂರು ಸರ್ಕಾರಿ ಆಸ್ಪತ್ರೆಯಲ್ಲಿ ಆಗಾಗ್ಗೆ ಕೆಲ ನ್ಯೂನತೆಗಳು ಕಂಡು ಬರುತ್ತಿರುವ ಹಿನ್ನಲೆಯಲ್ಲಿ ಆರೋಗ್ಯಾಧಿಕಾರಿಗಳು ಮತ್ತು ಆಸ್ಪತ್ರೆ ಆಡಳಿತಾಧಿಕಾರಿಗಳು ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಸಾರ್ವಜನಿಕರಿಗೆ ಸರಿಯಾದ ಚಿಕಿತ್ಸೆ ನೀಡದೆ ಹಾಸನ-ಚಿಕ್ಕಮಗಳೂರಿಗೆ ಕಳಿಸುವ ಪರಿಪಾಠ ಬೆಳೆಸಿಕೊಳ್ಳಬೇಡಿ ಹಾಗೇಯೆ ಅರಣ್ಯ ಇಲಾಖೆ ಅಧಿಕಾರಿಗಳು ಮಲೆನಾಡು ಭಾಗದಲ್ಲಿ ಮಾನವ-ಪ್ರಾಣಿ ಸಂಘರ್ಷಕ್ಕೆ ಎಡೆಮಾಡದೆ ಕ್ರಮವಹಿಸಬೇಕಿದೆ. ವಿಶೇಷವಾಗಿ ಕಾಡಾನೆಗಳು ಹೊಲ-ಗದ್ದೆಗಳಿಗೆ ಪ್ರವೇಶಿದಂತೆ ಸಹಾಯಧನದಲ್ಲಿ ತಂತಿಬೇಲಿ ನೀಡುವ ಮತ್ತು ವಿವಿಧ ಸೌಲಭ್ಯಗಳನ್ನು ಮಲೆನಾಡು ಕೃಷಿಕರಿಗೆ ನೀಡಬೇಕು ಎಂದು ತಾಕೀತು ಮಾಡಿದರು.

ಕೆಡಿಪಿ ಸಭೆಯಲ್ಲಿ ಆಡಳಿತಾಧಿಕಾರಿ ಡಾ.ರಮೇಶ್, ತಾಲ್ಲೂಕು ಪಂಚಾಯಿತಿ ಇಒ ಸತೀಶ್, ಸಿಪಿಐ ರೇವಣ್ಣ, ಅರೇಹಳ್ಳಿ-ಹಳೇಬೀಡು ಸಿಪಿಐ ಜಗದೀಶ್ ಇತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಮಾರ್ಚ್-07

1876: ಅಲೆಕ್ಸಾಂಡರ್ ಗ್ರಾಹಂ ಬೆಲ್ ಅವರು ಟೆಲಿಫೋನ್ ಆವಿಷ್ಕಾರದ ಪೇಟೆಂಟ್ ಪಡೆದರು. ದೂರಸಂಪರ್ಕ ಕ್ಷೇತ್ರದಲ್ಲಿ ಇದು ಮಹತ್ವದ ಕ್ರಾಂತಿಗೆ ಕಾರಣವಾಯಿತು.

1936: ಜರ್ಮನಿಯ ನಾಯಕ ಅಡಾಲ್ಫ್ ಹಿಟ್ಲರ್ ನೇತೃತ್ವದಲ್ಲಿ ನಾಜಿ ಸೇನೆ Remilitarization of the Rhineland ನಡೆಸಿತು. ಇದು ದ್ವಿತೀಯ ವಿಶ್ವಯುದ್ಧದ ಮುನ್ನೋಟವಾಗಿ ಪರಿಗಣಿಸಲಾಗುತ್ತದೆ.

1965: ಅಮೆರಿಕದ ನಾಗರಿಕ ಹಕ್ಕುಗಳ ಹೋರಾಟದಲ್ಲಿ ಪ್ರಮುಖ ಘಟನೆ ಆಗಿದ್ದ Bloody Sunday ನಡೆಯಿತು. ಆಫ್ರೋ-ಅಮೆರಿಕನ್ ಮತದಾನದ ಹಕ್ಕಿಗಾಗಿ ನಡೆದ ಮೆರವಣಿಗೆಯ ಮೇಲೆ ಪೊಲೀಸರು ದಾಳಿ ನಡೆಸಿದರು.

1987: ಪ್ರಸಿದ್ಧ ಬಾಕ್ಸರ್ ಮೈಕ್ ಟೈಸನ್ ವಿಶ್ವ ಹೆವಿವೇಟ್ ಬಾಕ್ಸಿಂಗ್ ಪ್ರಶಸ್ತಿ ಕಾಯ್ದುಕೊಂಡರು.

2009: ಗ್ರಹಗಳನ್ನು ಹುಡುಕುವ ಉದ್ದೇಶದಿಂದ ನಾಸಾ ಸಂಸ್ಥೆ Kepler Space Telescope ಅನ್ನು ಅಂತರಿಕ್ಷಕ್ಕೆ ಉಡಾಯಿಸಿತು.

### ಜನನ

1875: ಮೋರಿಸ್ ರಾವೆಲ್, ಫ್ರೆಂಚ್ ಸಂಗೀತ ಸಂಯೋಜಕ

1904: ರೀನ್ಹಾರ್ಡ್ ಹೈಡ್ರಿಚ್, ನಾಜಿ ಜರ್ಮನಿಯ ಪ್ರಮುಖ ಅಧಿಕಾರಿಗಳಲ್ಲಿ ಒಬ್ಬ

1952: ಅನೂಪ್ ಜಲೋಟಾ, ಭಾರತದ ಭಜನ್ ಗಾಯಕ

1980: ಲೌರಾ ಪ್ರೆಪಾನ್, ಅಮೆರಿಕದ ನಟಿ

### ಮರಣ

1999: ಪ್ರಸಿದ್ಧ ಚಲನಚಿತ್ರ ನಿರ್ದೇಶಕ ಸ್ಟಾನ್ಲಿ ಕುಬ್ರಿಕ್

1948: ಬಾಲ ಗಂಗಾಧರ ತಿಲಕ್ ಅವರ ಆಪ್ತ ಸಹೋದ್ಯೋಗಿ ಹಾಗೂ ಸ್ವಾತಂತ್ರ್ಯ ಹೋರಾಟಗಾರ ಶ್ರೀಪಾದ್ ಅಮೃತ್ ಡಾಂಗೆ

2015: ಪ್ರಸಿದ್ಧ ವಿಜ್ಞಾನ ಲೇಖಕ ಆರ್ಥರ್ ಸಿ. ಕ್ಲಾರ್ಕ್

# ರಸ್ತೆ ಅಪಘಾತ ನಿಯಂತ್ರಣಕ್ಕೆ ಸೂಕ್ತ ಕ್ರ ಕೈಗೊಳ್ಳಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ನಡೆಯುವ ಪ್ರತಿಯೊಂದು ಅಪಘಾತಗಳ ಬಗ್ಗೆ ತನಿಖೆಯಾಗಬೇಕು ಕಾರಣವನ್ನು ಅರಿತು, ಮತ್ತೊಮೆ ಅದೇ ಸ್ಥಳದಲ್ಲಿ ಅಪಘಾತವಾಗದಂತೆ ಎಚ್ಚರ ವಹಿಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ರಸ್ತೆ ಸುರಕ್ಷತಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರತಿಯೊಬ್ಬರ ಜೀವ ಅಮೂಲ್ಯವಾದದ್ದು ಒಬ್ಬರನ್ನು ನಂಬಿಕೊಂಡು ಇಡೀ ಜೀವನ ಸಾಗಿಸುತ್ತಿರುತ್ತದೆ, ಅಪಘಾತದಿಂದ ಸಾವು ನೋವುಗಳಾದರೆ ಕುಟುಂಬವೇ ಬೀದಿ ಪಾಲಾಗುತ್ತದೆ ಆದ್ದರಿಂದ ಎಚ್ಚರವಹಿಸಿ ಆದ್ಯತೆ ಮೇಲೆ ಕೆಲಸಗಳನ್ನು ಮಾಡಬೇಕು ಎಂದು ಸೂಚಿಸಿದರು.

ಅಪಘಾತದಲ್ಲಿ ಹೆಚ್ಚು ಮರಣ ಹೊಂದಿರುವುದರಲ್ಲಿ ರಾಜ್ಯದಲ್ಲಿ ಹಾಸನ ಜಿಲ್ಲೆ 4ನೇ ಸ್ಥಾನದಲ್ಲಿದೆ. ಅಪಘಾತದಿಂದ ವರ್ಷಕ್ಕೆ ಸುಮಾರು 500 ಸಾವುಗಳು ಸಂಭವಿಸುತ್ತೇವೆ ಇದನ್ನು ತಡೆಗಟ್ಟಲು ಸಂಚಾರಿ ಕಾನೂನುಗಳನ್ನು ಪಾಲಿಸಲು ಅರಿವು ಕಾರ್ಯಕ್ರಮಗಳನ್ನು ಪ್ರತಿ ತಿಂಗಳು ಆಯೋಜನೆ ಮಾಡಬೇಕು ಎಂದರು. ಪ್ರತಿ ವಾರ ರಸ್ತೆ ಸುರಕ್ಷತೆ ಬಗ್ಗೆ ಸಭೆ ನಡೆಸಬೇಕು ಹಿಂದಿನ ಸಭೆಯಲ್ಲಿ ನೀಡಿದ ಸಲಹೆ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಹಾಗೂ ತಾಲೂಕು ಮಟ್ಟದಲ್ಲಿ ರಚಿಸಲಾಗಿರುವ ರಸ್ತೆ ಸುರಕ್ಷತಾ ಸಮಿತಿಯ ಸಭೆಯನ್ನು ನಡೆಸಿ ಕೈಗೊಂಡ ಕ್ರಮಗಳ ವರದಿಯನ್ನು ಜಿಲ್ಲಾ ಸಮಿತಿಗೆ ಸಲ್ಲಿಸುವಂತೆ ಸೂಚಿಸಿದರು.

ಫುಟ್ ಬಾತ್ ಹಾಗೂ ರಸ್ತೆಯ ಮೇಲೆ ವ್ಯಾಪಾರ ನಡೆಸುತ್ತಿರುವವರನ್ನು ಕೂಡಲೇ ತರುವುಗೊಳಿಸಬೇಕು ಇದರಿಂದ ಅಪಘಾತಗಳು ಹೆಚ್ಚಾಗುತ್ತಿವೆ ಎಂದು ತಿಳಿಸಿದರು.

ಬ್ಲಾಕ್ ಸ್ಪಾಟ್ ಗಳನ್ನು ಗುರುತಿಸಿ ಹಂಪ್ಸ್ ನಿರ್ಮಾಣ ಮಾಡಬೇಕು ನಂತರ ಸೂಚನಾ ಫಲಕಗಳನ್ನು ಅಳವಡಿಸಬೇಕು ಹಾಗೂ ಪೇಂಟಿಂಗ್ ಆಗಬೇಕು ಹಾಗೂ ತುರ್ತು ಸಹಾಯವಾಣಿ ಸಂಖ್ಯೆಯ ಫಲಕಗಳನ್ನು ಅಳವಡಿಸಬೇಕು ಫಲಕಗಳನ್ನು ಅಳವಡಿಸಬೇಕು ಎಂದರು.

ರಸ್ತೆಗಳಲ್ಲಿ ವನ್ಯಜೀವಿಗಳು ದಾಟುವ ಪ್ರದೇಶವನ್ನು ಅರಣ್ಯ ಇಲಾಖೆಯವರು ಗುರುತಿಸಿ ವನ್ಯ ದೇವಿ ದಾಟುವ ಸ್ಥಳ ಎಂದು ಸೂಚಕ ಫಲಕಗಳನ್ನು ಅಳವಡಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಶ್ರೀನಿಧಿ, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ಹಾಗೂ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಪುರದಮ್ಮ ಜಾತ್ರೆ: ಇಂದು ಪೂರ್ವಭಾವಿ ಸಭೆ


ಹಾಸನ: ತಾಲೂಕಿನ ಸಾಲಗಾಮೆ ಹೋಬಳಿ ಬೀಕನಹಳ್ಳಿ ಗ್ರಾಮದಲ್ಲಿರುವ ಶ್ರೀ ಚೌಡೇಶ್ವರಿ (ಪುರದಮ) ದೇವಾಲಯದ ಜಾತ್ರಾ ಮಹೋತ್ಸವ ಅಂಗವಾಗಿ ಮಾ. 7ರಂದು ಪೂರ್ವಭಾವಿ ಸಭೆ ಆಯೋಜಿಸಲಾಗಿದೆ.

ಮಾ. 19 ಮತ್ತು 20ರಂದು ಜಾತ್ರಾ ಮಹೋತ್ಸವ ನಡೆಯಲಿದೆ. ಈ ಹಿನ್ನಲೆಯಲ್ಲಿ ಕೈಗೊಳ್ಳಬೇಕಿರುವ ಕ್ರಮಗಳ ಕುರಿತು ಚರ್ಚಿಸಲು ಸಭೆ ನಡೆಸಬೇಕೆಂದು ಗ್ರಾಮಸ್ಥರು ಹಾಗು ಭಕ್ತರ ಕೋರಿಕೆ ಮೇರೆಗೆ ಶನಿವಾರ ಮಧ್ಯಾಹ್ನ 2 ಗಂಟೆಗೆ ದೇವಾಲಯ ಆವರಣದಲ್ಲಿ ಸಭೆ ನಿಗದಿಪಡಿಸಲಾಗಿದೆಯೆಂದು ದೇವಾಲಯ ಆಡಳಿತಾಧಿಕಾರಿ ಯು.ಎಂ. ಪ್ರಕಾಶ್ ಕುಮಾರ್ ತಿಳಿಸಿದ್ದಾರೆ. ದೇವಾಲಯದ ವ್ಯವಸ್ಥಾಪನ ಸಮಿತಿ ಹಾಲಿ ಹಾಗೂ ಮಾಜಿ ಸದಸ್ಯರು, ಚುನಾಯಿತ ಪ್ರತಿನಿಧಿಗಳು, ವಿವಿಧ ಪಕ್ಷಗಳ ಮುಖಂಡರು, ಅಧಿಕಾರಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿ ಸಲಹೆ ಸೂಚನೆ ನೀಡಬೇಕೆಂದು ಅವರು ಕೋರಿದ್ದಾರೆ.

# ನುಗ್ಗೇಹಳ್ಳಿಗೆ ಸತ್ಯ ಸಾಯಿ ಪ್ರೇಮ ಪ್ರವಾಹಿನಿ ರಥ ಆಗಮನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ನುಗ್ಗೇಹಳ್ಳಿ: ದೇಶಾದ್ಯಂತ ಸಂಚಾರ ಕೈಗೊಂಡಿರುವ ಶ್ರೀ ಸತ್ಯ ಸಾಯಿ ಪ್ರೇಮ ಪ್ರವಾಹಿನಿ ರಥಯಾತ್ರೆಗೆ ನುಗ್ಗೇಹಳ್ಳಿಯಲ್ಲಿ ಅದ್ದೂರಿ ಸ್ವಾಗತ ಕೋರಲಾಯಿತು.



ಆಂಧ್ರ ಪ್ರದೇಶದ ಪುಟಬರ್ತಿಯಿಂದ 2025ರ ಏಪ್ರಿಲ್‌ನಿಂದ ರಥ ಪ್ರಯಾಣ ಬೆಳೆಸಿದ್ದು, ಉತ್ತರ ಭಾರತ ಸೇರಿ 8000 ಸಾವಿರ ಗ್ರಾಮಗಳ ಒಟ್ಟು 3,50 ಲಕ್ಷ ಕಿ.ಮೀ. ಸಂಚರಿಸಿದೆ. ಸತ್ಯಸಾಯಿ ಅವರ 100ನೇ ವರ್ಷದ ಜನದಿನದ ಪ್ರಯುಕ್ತ ರಥಯಾತ್ರೆ ಕೈಗೊಳ್ಳಲಾಗಿದೆ. ನಾಗರಿಕರ ವೇದಿಕೆ ಅಧ್ಯಕ್ಷ ತೋಟಿ ನಾಗರಾಜ್ ಮಾತನಾಡಿ, ಹೋಬಳಿ ಕೇಂದ್ರದಲ್ಲಿ ಸತ್ಯಸಾಯಿ ಸೇವಾ ಸಮಿತಿಯ ಸದಸ್ಯರು ಶ್ರದ್ಧಾ ಭಕ್ತಿಯಿಂದ ರಥ ಸ್ವಾಗತಿಸಿದ್ದಾರೆ. ತಾಲ್ಲೂಕಿನ ಕೆಲವು ಭಾಗಗಳಲ್ಲಿ ರಥಯಾತ್ರೆ ಸಂಚರಿಸಲಿದ್ದು, ಜಿಲ್ಲಾ ಕೇಂದ್ರಕ್ಕೆ ಮಾ. 6 ರಂದು ಯಾತ್ರೆ ಹೋಗಲಿದೆ.

ಸತ್ಯಸಾಯಿ ಸೇವಾ ಸಮಿತಿಯ ಭಕ್ತರು ಸೇವಾ ಮನೋಭಾವ ಹೊಂದಿದ್ದಾರೆ. ಆಶ್ರಮ ಸೇರಿ ಆಸ್ಪತ್ರೆಯಲ್ಲಿ ತಮ ಸೇವೆ ಸಲ್ಲಿಸುವ ಮೂಲಕ ಭಕ್ತಿ ಸಮರ್ಪಿಸುತ್ತಿದ್ದಾರೆಂದರು. ಹೋಬಳಿ ಕೇಂದ್ರದ ಸದಾಶಿವ ಸ್ವಾಮಿ ದೇವಾಲಯದ ಆವರಣದಲ್ಲಿ ರಥವನ್ನು ನಿಲ್ಲಿಸಲು ವ್ಯವಸ್ಥೆ ಕಲ್ಪಿಸಲಾಯಿತು. ನೂರಾರು ಭಕ್ತರು ಸತ್ಯಸಾಯಿ ರಥಕ್ಕೆ ಪೂಜೆ ಸಲ್ಲಿಸಿದರು. ಕಲ್ಯಾಣಿ ಆಂಜನೇಯಸ್ವಾಮಿ ದೇವಾಲಯದಲ್ಲಿ ಭಕ್ತರಿಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು.

# ಪ್ರತ್ಯೇಕ ಅಪಘಾತದಲ್ಲಿ ಇಬ್ಬರು ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ವೇಗದ ಚಾಲನೆಯಿಂದಾಗಿ ಟ್ರ್ಯಾಕ್ಟರ್‌ನಲ್ಲಿ ಕುಳಿತಿದ್ದ ವ್ಯಕ್ತಿ ಕೆಳಗೆ ಬಿದ್ದು ಮೃತಪಟ್ಟಿರುವ ಘಟನೆ ತಾಲ್ಲೂಕಿನ ನಿಟ್ಟೂರು ಕ್ರಾಸ್ ಸಮೀಪ ನಡೆದಿದೆ.

ಬೀದರ್ ತಾಲ್ಲೂಕು ಬಗ್ದಾಲು ಗ್ರಾಮದ ದಶರಥ (33) ಮೃತರು. ಸೆಂಟ್ರಿಂಗ್ ಕೆಲಸ ಮಾಡಿಕೊಂಡು ಕೋಗಿಲೆ ಮನೆ ಗ್ರಾಮದಲ್ಲಿದ್ದರು. ಗುರುವಾರ ನೀರಿನ ಟ್ಯಾಂಕ್‌ಗೆ ಅಳವಡಿಸಿದ್ದ ಕಬ್ಬಿಣದ ಸೆಂಟ್ರಿಂಗ್ ಪ್ಲೇಟ್‌ಗಳನ್ನು ಬಿಚ್ಚಿ ಟ್ರ್ಯಾಕ್ಟರ್‌ನಲ್ಲಿ ತುಂಬಿಕೊಂಡು ಚನ್ನಾಪುರದ ಕಡೆಗೆ ಹೋಗುತ್ತಿದ್ದಾಗ ಚಾಲಕ ನೆಲ್ಸನ್ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿದ್ದರಿಂದ ದಶರಥ ರಸ್ತೆ ಮೇಲೆ ಬಿದ್ದಿದ್ದಾರೆ. ತಲೆ ಹಾಗೂ ಎದೆಗೆ ಬಲವಾದ ಪೆಟ್ಟು ಬಿದ್ದಿದ್ದರಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬೇಲೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಆಟೋ ಡಿಕ್ಕಿಯಾಗಿ ಪಾದಚಾರಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಅರೆಕಲ್ ಹೊಸಳ್ಳಿ ಸಮೀಪ ನಡೆದಿದೆ.

ಉದ್ದೂರು ಕೊಪ್ಪಲು ಗ್ರಾಮದ ನಾಗರಾಜು (40) ಮೃತರು. ಮನೆಗೆ ಸಾಮಗ್ರಿ ತರಲು ಅಂಗಡಿಗೆ ತೆರಳಿದ್ದ ಅವರು ವಾಪಸ್ ಬರುವಾಗ ಹಿಂದಿನಿಂದ ವೇಗವಾಗಿ ಬಂದ ಆಟೋ ಡಿಕ್ಕಿಯಾಗಿದೆ. ಗಂಭೀರ ಪೆಟ್ಟಾಗಿದ್ದರಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248